# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1133 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕೃಷಿ ಸಚಿವರು |
| ಉತ್ತರಿಸುವ ದಿನಾಂಕ | 15.12.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಉಂಟಾಗಿರುವ ತೀವ್ರ ಬರಗಾಲದಿಂದ ರೈತರು ಮತ್ತು ಕೃಷಿಕರು ಅನುಭವಿಸುತ್ತಿರುವ ಸಂಕಷ್ಟ ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಅವರ ಸಂಕಷ್ಟಗಳನ್ನು ಪರಿಹರಿಸಿ ರೈತರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದಲ್ಲಿ ಉಂಟಾಗಿರುವ ಬರಗಾಲದಿಂದ ರೈತರು ಅನುಭವಿಸುತ್ತಿರುವ ಸಂಕಷ್ಟ ಸರ್ಕಾರದ ಗಮನಕ್ಕೆ ಬಂದಿದೆ.<br>ಎನ್.ಡಿ.ಆರ್.ಎಫ್. ಮಾರ್ಗಸೂಚಿಯನ್ವಯ ಬರದಿಂದ ಹಾನಿಯಾದ ಬೆಳೆಗಳಿಗೆ ಇನ್ ಪುಟ್ ಸಬ್ಸಿಡಿಯನ್ನು ಅಂದಾಜಿಸಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br>ಕರ್ನಾಟಕ ರೈತ ಸುರಕ್ಷ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಮುಂಗಾರು 2023ರ ಹಂಗಾಮಿನಲ್ಲಿ ಪ್ರಕೃತಿ ವಿಕೋಪದಡಿ ಬಿತ್ತನೆ/ ನಾಟಿ ಪೂರ್ಣವಾಗಿ ವಿಫಲಗೊಂಡ (Prevented sowing/ planting risk) ಮತ್ತು ಮಧ್ಯಂತರ ಬೆಳೆ ವಿಮೆ ಪರಿಹಾರದಡಿ ಒಟ್ಟು 6.77 ಲಕ್ಷ ರೈತ ಫಲಾನುಭವಿಗಳಿಗೆ ರೂ.45959.47 ಲಕ್ಷಗಳ ಬೆಳೆವಿಮೆ ಪರಿಹಾರ ಮೊತ್ತವನ್ನು ವಿಮಾ ಸಂಸ್ಥೆಯಿಂದ ಇತ್ಯರ್ಥ ಪಡಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ ಒಟ್ಟು ಬೆಳೆಹಾನಿಯೆಷ್ಟು; ಇದರಿಂದ ಉಂಟಾಗಿರುವ ಆರ್ಥಿಕ ನಷ್ಟವೆಷ್ಟು; ರೈತರಿಗೆ ಉಂಟಾಗಿರುವ ನಷ್ಟವನ್ನು ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | 2023 ರ ಮುಂಗಾರು ಹಂಗಾಮಿನ ಬರ ಪರಿಸ್ಥಿತಿಯಿಂದ ರಾಜ್ಯದ 31 ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಜಂಟಿ ಸಮೀಕ್ಷೆ ವರದಿಯನ್ವಯ 46.11 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಬೆಳೆ ನಷ್ಟ ವರದಿಯಾಗಿರುತ್ತದೆ. ಬರಗಾಲದಿಂದ ಕೃಷಿ ಬೆಳೆಗಳಲ್ಲಿ ರೂ.32250.48 ಕೋಟಿಗಳಷ್ಟು ಆರ್ಥಿಕ ನಷ್ಟವನ್ನು ಅಂದಾಜಿಸಲಾಗಿದೆ. |

| | | |
|---|---|---|
| | | ರೈತರಿಗೆ ಉಂಟಾಗಿರುವ ನಷ್ಟವನ್ನು ಪರಿಹರಿಸುವ ನಿಟ್ಟಿನಲ್ಲಿ ಎನ್.ಡಿ.ಆರ್.ಎಫ್. ಮಾರ್ಗಸೂಚಿಯನ್ವಯ ಬರದಿಂದ ಹಾನಿಯಾದ ಬೆಳೆಗಳಿಗೆ ಇನ್ ಪುಟ್ ಸಬ್ಸಿಡಿಯನ್ನು ಅಂದಾಜಿಸಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br><br>ಹಾಗೂ ಕರ್ನಾಟಕ ರೈತ ಸುರಕ್ಷ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಮುಂಗಾರು 2023ರ ಹಂಗಾಮಿನಲ್ಲಿ ಪ್ರಕೃತಿ ವಿಕೋಪದಡಿ ಬಿತ್ತನೆ/ ನಾಟಿ ಪೂರ್ಣವಾಗಿ ವಿಫಲಗೊಂಡ (Prevented sowing/ planting risk) ಮತ್ತು ಮಧ್ಯಂತರ ಬೆಳೆ ವಿಮೆ ಪರಿಹಾರದಡಿ ಒಟ್ಟು 6.77 ಲಕ್ಷ ರೈತ ಫಲಾನುಭವಿಗಳಿಗೆ ರೂ.45959.47 ಲಕ್ಷಗಳ ಬೆಳೆವಿಮೆ ಪರಿಹಾರ ಮೊತ್ತವನ್ನು ವಿಮಾ ಸಂಸ್ಥೆಯಿಂದ ಇತ್ಯರ್ಥ ಪಡಿಸಲಾಗುತ್ತಿದೆ.<br><br>ಬರಗಾಲದಿಂದ ಬೆಳೆಗಳ ಇಳುವರಿಯ ಕುಸಿತವನ್ನು ಕಡಿಮೆ ಮಾಡಲು ಕೃಷಿ ಇಲಾಖೆಯಿಂದ ಈ ಕೆಳಗಿನ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ಸಮಗ್ರ ಬೆಳೆ ಪದ್ಧತಿಗಳನ್ನು ಅನುಸರಿಸಲು ತರಬೇತಿಗಳ ಮೂಲಕ ಅರಿವು ಮೂಡಿಸಲಾಗಿರುತ್ತದೆ.<br>• ಪರ್ಯಾಯ ಬೆಳೆ ಯೋಜನೆಗಳನ್ನು ರೂಪಿಸಿ, ಅವುಗಳನ್ನು ಅಳವಡಿಸಲು ರೈತರಿಗೆ ತಿಳುವಳಿಕೆ ನೀಡಲಾಗಿರುತ್ತದೆ.<br>• ಕಾವೇರಿ ಅಚ್ಚುಕಟ್ಟು ಪ್ರದೇಶಗಳಲ್ಲಿ ಭತ್ತದ ಬೆಳೆಯನ್ನು ಬೆಳೆಯದಿರಲು ಸಲಹೆಗಳನ್ನು ನೀಡಲಾಗಿರುತ್ತದೆ.<br>• ಬೆಳೆ ತೇವಾಂಶ ಕೊರತೆ ಇದ್ದಲ್ಲಿ ತೇವಾಂಶ ಕಾಪಾಡುವ ಕುರಿತು ರೈತರಿಗೆ ತಿಳುವಳಿಕೆ ನೀಡಲಾಗಿರುತ್ತದೆ. ಲಭ್ಯವಿರುವ ನೀರಿನ ಸಮರ್ಪಕ ಬಳಕೆ ಮಾಡಲು ಹನಿ/ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಸಹಾಯಧನ ನೀಡಲಾಗಿರುತ್ತದೆ. |

| | | |
|---|---|---|
| | | • ಕೃಷಿ ವಿಜ್ಞಾನ ಕೇಂದ್ರ, ಕೃಷಿ ವಿಶ್ವವಿದ್ಯಾಲಯಗಳು ಮತ್ತು ಕೃಷಿ ಸಂಬಂಧಿತ ಇಲಾಖೆಗಳ ಸಹಯೋಗದೊಂದಿಗೆ ಮಳೆ ಪ್ರಮಾಣ, ಬೆಳೆಯಬಹುದಾದ ಬೆಳೆ ಇತ್ಯಾದಿಗಳ ಬಗ್ಗೆ ರೈತರಿಗೆ ಮಾಹಿತಿ ನೀಡಲಾಗಿದೆ.<br><br>ರಾಜ್ಯದಲ್ಲಿ ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನಲ್ಲಿ ಬರ ಪರಿಸ್ಥಿತಿಯಿಂದ 46.11 ಲಕ್ಷ ಹೆಕ್ಟೇರ್ ಕೃಷಿ ಹಾಗೂ 2.06 ಲಕ್ಷ ಹೆಕ್ಟೇರ್ ತೋಟಗಾರಿಕೆ ಸೇರಿದಂತೆ ಒಟ್ಟು 48.17 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿದ್ದು, ಇದರಿಂದ ಸುಮಾರು 35,162.05 ಕೋಟಿಗಳಷ್ಟು ನಷ್ಟವಾಗಿರುತ್ತದೆ. ಬೆಳೆಹಾನಿ ಇನ್ ಪುಟ್ ಸಬ್ಸಿಡಿಗೆ NDRF ಅಡಿಯಲ್ಲಿ ರೂ. 4663.12 ಕೋಟಿಗಳ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೋರಾಂಡಮ್ ಸಲ್ಲಿಸಲಾಗಿದ್ದು, ಕೇಂದ್ರದಿಂದ ಅನುದಾನ ನಿರೀಕ್ಷಿಸಲಾಗಿದೆ. |
| ಇ) | ಬರಗಾಲದಿಂದ ಸಂಕಷ್ಟಕ್ಕೊಳಗಾದ ರೈತರು ಆತ್ಮಹತ್ಯೆ ಮಾಡಿಕೊಂಡಿರುವ ನಿದೇಶನಗಳಿವೆಯೇ; ಹಾಗಿದ್ದಲ್ಲಿ, ಆತ್ಮಹತ್ಯೆಗೊಳಗಾದ ರೈತರ ಕುಟುಂಬಗಳಿಗೆ ಸರ್ಕಾರ ಯಾವ ರೀತಿ ಪರಿಹಾರವನ್ನು ನೀಡಲು ಕ್ರಮ ಕೈಗೊಂಡಿದೆ? | ರಾಜ್ಯದಲ್ಲಿ ಸಾಲಭಾದೆಯಿಂದ ಸಂಕಷ್ಟಕೊಳಗಾದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದು ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ಸರ್ಕಾರವು ಪರಿಹಾರವನ್ನು ಒದಗಿಸಲು ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಲಾಗಿದೆ. ಸದರಿ ಸಮಿತಿ ನಿರ್ಣಯದ ಮೇರೆಗೆ ಅರ್ಹ ರೈತ ಕುಟುಂಬಕ್ಕೆ ಸರ್ಕಾರದ ಆದೇಶ ಸಂಖ್ಯೆ ಕೃಇ 42 ಕೃಕೈಉ 2019 ದಿನಾಂಕ 08.07.2021 ರಂತೆ ರೂ5.00 ಲಕ್ಷಗಳ ಪರಿಹಾರದ ಮೊತ್ತವನ್ನು ಆಧಾರ್ ಆಧಾರಿತ ವ್ಯವಸ್ಥೆಯಡಿ ಕಂದಾಯ ಇಲಾಖೆ ವತಿಯಿಂದ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: AGRI/260/ACT/2023**

14/12

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು